(ಉ) ಇಲ್ಲ ಬಡವರು, ಕೂಲಿಗಾರರಿಗೆ ಇದರಿಂದ ಹೆಚ್ಚು ಪ್ರಯೋಜನವಾಗುವುದು. ಈ ಯೋಜನೆಯು ಜಾರಿಯಲ್ಲಿರುವತನಕ ಅನುದಾನದ ಲಭ್ಯತೆಗೆ ಅನುಗುಣವಾಗಿ ಪರಿಹಾರವನ್ನು ನೀಡಲು ಕ್ರಮ ವಹಿಸಲಾಗುವುದು.

661. ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಕಂದಾಯ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಡಾ: ನಂಜುಂಡಪ್ಪನವರ ವರದಿಯನ್ನಾಧರಿಸಿ ಪ್ರಾದೇಶಿಕ ಅಸಮತೋಲನೆಯನ್ನು ಸರಿಪಡಿಸುವ ಹಿನ್ನೆಲೆಯಲ್ಲಿ ಬಿಜಾಪುರ ಜಿಲ್ಲೆಯ ತಾಳಿಕೋಟೆ ಉಪ ವಿಭಾಗವು ಅತ್ಯಂತ ಜನಸಂದಣಿಯಿಂದ ಕೂಡಿ ವಾಣಿಜ್ಯ ವ್ಯವಹಾರ ಕೇಂದ್ರವಾಗಿದ್ದು ತಾಳಿಕೋಟೆ ಉಪ ವಿಭಾಗದಲ್ಲಿ ಒಂದು ಉಪ ನೋಂದಣಿ ಕಛೇರಿಯನ್ನು ಪ್ರಾರಂಭಿಸಲು ಸರ್ಕಾರ ಆಲೋಚಿಸಿದೆಯೇ?

(ಆ) ಹಾಗಿದ್ದಲ್ಲಿ, ತಾಳಿಕೋಟೆ ಉಪವಿಭಾಗಕ್ಕೆ ಉಪನೋಂದಣಿ ಕಛೇರಿಯನ್ನು ಪ್ರಾರಂಭಿಸಲು ಇದುವರೆಗೆ ಸರ್ಕಾರ ಕೈಗೊಂಡ ಕ್ರಮವೇನು;

(ಇ) ಈ ಬಗ್ಗೆ ಸರ್ಕಾರವು ಕೈಗೊಳ್ಳಲಿರುವ ಕ್ರಮದ ಬಗ್ಗೆ ನಿರ್ದಿಷ್ಟ ಕಾಲಾವಧಿಯನ್ನು ಪ್ರಕಟಿಸಲಿದೆಯೇ?

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಕಂದಾಯ ಸಚಿವರು)

(ಅ) ಇಲ್ಲ.

(ಆ) ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಇರುವ ಉಪ ನೋಂದಣಿ ಕಛೇರಿಯಲ್ಲಿ ಕಳೆದ ಮೂರು ವರ್ಷಗಳಿಂದ ವಾರ್ಷಿಕ ಸರಾಸರಿ 3892 ದಸ್ತಾವೇಜುಗಳು ನೋಂದಣಿಯಾಗಿದ್ದು, ತಾಳಿಕೋಟೆ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಕಳೆದ ಮೂರು ವರ್ಷಗಳ ಸರಾಸರಿ 260 ದಸ್ತಾವೇಜುಗಳು ನೋಂದಣಿಯಾಗಿರುತ್ತವೆ. ಈ ಸಂಖ್ಯೆಯನ್ನು ಆಧರಿಸಿ ಹೊಸ ಉಪ ನೋಂದಣಿ ಕಛೇರಿಯನ್ನು ಪ್ರಾರಂಭಿಸುವುದು ಆಡಳಿತದ ಹಿತದೃಷ್ಟಿಯಿಂದ ಸಮಂಜಸವಾಗಿರುವುದಿಲ್ಲ.

(ಇ) ಮೇಲಿನ ಕಾರಣದಿಂದ ಇದು ಉದ್ಭವಿಸುವುದಿಲ್ಲ.

(415) ಶ್ರೀ ಸೋಮಣ್ಣ ಎ. (ಬಿನ್ನಿಪೇಟೆ) :– ಮಾನ್ಯ ಕಂದಾಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–